**ಪ್ರಧಾನ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ**

**ಸಿ.ಸಿ. ನಂ. 464/2025**

| | | | |
|---|---|---|---|
| **ಹೆಸರು** | **:** | **ಈರಣ್ಣಾ** | **ಚಾಸಾ. 2** |
| **ತಂದೆಯ ಹೆಸರು** | **:** | **ಈಶ್ವರಪ್ಪ** | **ಪ್ರಾ.ಸಾ. 2** |
| **ವಯಸ್ಸು** | **:** | **46 ವರ್ಷ** | **ದಿನಾಂಕಃ 16-07-2026** |
| **ಉದ್ಯೋಗ** | **:** | **ಒಕ್ಕಲುತನ** | |
| **ವಾಸಸ್ಥಳ** | **:** | **ಗರಗಪಳ್ಳಿ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ಈಗ ಸಾಕ್ಷಿದಾರರಿಗೆ ಒಂದು ದಾಖಲೆಯನ್ನು ತೋರಿಸಿ ಸದರಿ ದಾಖಲೆಯೂ ಜಪ್ತಿ ಪಂಚನಾಮೆಯಾಗಿದ್ದು, ಸದರಿ ದಾಖಲೆಯನ್ನು ನಿಪಿ-1, ಸಾಕ್ಷಿದಾರರ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಸದರಿ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೋಲಿಸರ ಕೋರಿಕೆಯ ಮೇರೆಗೆ ಸಹಿ ಮಾಡಿರುತ್ತೇನೆ. ಮುದ್ದೆ ಮಾಲು ಮತ್ತು ಆರೋಪಿತರನ್ನು ಸಾಕ್ಷಿದಾರರು ನೋಡಿ ಗೊತ್ತಿಲ್ಲ ಎಂದು ನುಡಿಯುತ್ತಾರೆ.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಈ ಸಾಕ್ಷಿ ಭಾಗಶಃ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದಃ**

ದಿನಾಂಕ 15-04-2024ರಂದು ಪೋಲಿಸರು ನನ್ನ ಮತ್ತು ಚಾಸಾ-3ರವರ ಸಮಕ್ಷಮ ಮಧ್ಯಾಹ್ನ 12.15 ರಿಂದ 1.15ರವರೆಗೆ ಪಂಚನಾಮೆ ಜರುಗಿಸಿ ಒಂದು ದ್ವಿಚಕ್ರ ವಾಹನ, 90 ml ನ 30 ಒರಿಜಿನಲ್ ಟೇಟ್ರಾ ಪ್ಯಾಕೇಟ ಮತ್ತು 650mlನ 12 KF ಸ್ಟ್ರಾಂಗ್ ಬೀಯರ ಬಾಟಲಗಳನ್ನು ಜಪ್ತಿ ಪಡಿಸಿದ್ದರು ಎಂದರೆ ಸರಿಯಲ್ಲ. ಆರೋಪಿತರ ಪರವಾಗಿ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಈಗ ಸಾಕ್ಷಿದಾರರಿಗೆ ಒಂದು ದಾಖಲೆಯನ್ನು ತೋರಿಸಿ, ಸದರಿ ದಾಖಲೆಯೂ ವಾರೆಂಟ್ ಆಗಿದ್ದು ಸಾಕ್ಷಿದಾರರು ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಗುರುತಿಸಿದರ ಮೇರೆಗೆ ಶೋಧನ ಸಮುಚಿತವನ್ನು ನಿಪಿ-2 ಮತ್ತು ಸಾಕ್ಷಿದಾರರ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿದಾರರಿಗೆ ಮಾದರಿ ಸೀಲ್ ಪತ್ರವನ್ನು ತೋರಿಸಿ, ಸಾಕ್ಷಿದಾರರು ತಮ್ಮ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಗುರುತಿಸಿದರ ಮೇರೆಗೆ ನಿಪಿ-

3 ಮತ್ತು ಸಾಕ್ಷಿಯನ್ನು ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು ಆರೋಪಿತರ ಪರ ಶ್ರೀ SNB ವಕೀಲರಿಂದ: ಇಲ್ಲಾ.**

**ಮುಖ್ಯ ವಿಚಾರಣೆಃ ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**
**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಪ್ರ.ದ.ನ್ಯಾ.ದಂ. ಚಿಂಚೋಳಿ**